ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ - ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ    ದಿನಾಂಕ : DATE : 23/6/2020

## ಎಂಟಿಬಿ ನಾಗರಾಜ್, ಶಂಕರ್ ಇನ್ನು ಅರ್ಹ

ಬೆಂಗಳೂರು: ವಿಧಾನಸಭೆಯಿಂದ ವಿಧಾನಪರಿಷತ್‌ಗೆ ನಡೆದ ಚುನಾವಣೆಯಲ್ಲಿ ಏಳು ಮಂದಿ ಅವಿರೋಧ ಆಯ್ಕೆಯಾಗಿದ್ದಾರೆ. ಒಟ್ಟು ಒಂಬತ್ತು ಮಂದಿ ನಾಮಪತ್ರ ಸಲ್ಲಿಸಿದ್ದು, ಇಬ್ಬರು ಪಕ್ಷೇತರರ ನಾಮಪತ್ರ ಕ್ರಮಬದ್ಧವಾಗಿರದ ಕಾರಣ ತಿರಸ್ಕಾರಗೊಂಡಿತ್ತು. ಬಿಜೆಪಿಯ ಎನ್. ನಾಗರಾಜು (ಎಂಟಿಬಿ), ಪ್ರತಾಪ್ ಸಿಂಹ ನಾಯಕ್, ಆರ್.ಶಂಕರ್, ಸುನೀಲ್ ವಲ್ಯಾಪುರ, ಕಾಂಗ್ರೆಸ್‌ನ ನಸೀರ್ ಅಹ್ಮದ್, ಬಿ.ಕೆ.ಹರಿಪ್ರಸಾದ್ ಮತ್ತು ಜೆಡಿಎಸ್‌ನ ಇಂಚರ ಗೋವಿಂದರಾಜು ಆಯ್ಕೆಯನ್ನು ವಿಧಾನಸಭೆ ಕಾರ್ಯದರ್ಶಿ ಎಂ.ಕೆ. ವಿಶಾಲಾಕ್ಷಿ ಸೋಮವಾರ ಘೋಷಿಸಿದ್ದಾರೆ. ಕಾಂಗ್ರೆಸ್‌ನ ಜಯಮ್ಮ, ಎಂ.ಸಿ.ವೇಣುಗೋಪಾಲ್, ನಸೀರ್ ಅಹ್ಮದ್, ಎನ್.ಎಸ್.ಬೋಸರಾಜ್, ಎಚ್.ಎಂ.ರೇವಣ್ಣ, ಜೆಡಿಎಸ್‌ನ ಟಿ.ಎ.ಶರವಣ ಅವರ ಪರಿಷತ್ ಅವಧಿ ಮುಕ್ತಾಯ ವಾದ ಹಿನ್ನೆಲೆ ಜೂ.29ಕ್ಕೆ ಚುನಾವಣೆ ನಡೆಯಬೇಕಿತ್ತು. ಹೊಸಕೋಟೆ ಉಪಚುನಾವಣೆಯಲ್ಲಿ ಸೋತಿದ್ದ ಎಂಟಿಬಿ, ರಾಣೆಬೆನ್ನೂರು ಕ್ಷೇತ್ರ ಬಿಟ್ಟುಕೊಟ್ಟಿದ್ದ ಆರ್.ಶಂಕರ್ ಅವಿರೋಧ ಆಯ್ಕೆ ಮೂಲಕ ಪುನರ್ ಪ್ರವೇಶವಾಗಿದೆ.



» ಪರಿಷತ್‌ಗೆ 7 ಮಂದಿ ಅವಿರೋಧ ಆಯ್ಕೆ